ಕರ್ನಾಟಕ ಸರ್ಕಾರ

**ಕಾಲೇಜು ಶಿಕ್ಷಣ ಇಲಾಖೆ**

ಸಂಖ್ಯೆ: ಕಾಶಿಇ/ನೇವಿ-1/ಅಉಅ/315/2022-23

ಕಾಲೇಜು ಶಿಕ್ಷಣ ಆಯುಕ್ತರ ಕಛೇರಿ,
ಉನ್ನತ ಶಿಕ್ಷಣ ಸೌಧ,
ಶೇಷಾದ್ರಿ ರಸ್ತೆ, ಬೆಂಗಳೂರು-01,
ದಿನಾಂಕ:03-02-2023

## ಸುತ್ತೋಲೆ

ವಿಷಯ: 2022-23ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಹೆಚ್ಚುವರಿ ಬೋಧನಾ ಕಾರ್ಯಭಾರಕ್ಕೆ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಿಕೊಳ್ಳುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022.
2. ಸರ್ಕಾರದ ತಿದ್ದುಪಡಿ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021(ಇ), ದಿ:24.01.2022.
3. ಸರ್ಕಾರಿ ಆದೇಶ ಸಂಖ್ಯೆ: ಇಡಿ 18 ಡಿಸಿಇ 2023, ಬೆಂಗಳೂರು, ದಿನಾಂಕ:27.01.2023.
4. ಈ ಕಛೇರಿಯ ಸುತ್ತೋಲೆ ಸಂಖ್ಯೆ: ಕಾಶಿಇ/ನೇವಿ-1/ಅಉಅ/97/2021-22, ದಿನಾಂಕ:03.01.2023 ಮತ್ತು ಈ ಕಛೇರಿಯ ಇದೇ ಕ್ರಮಾಂಕದ ಸುತ್ತೋಲೆ ದಿನಾಂಕ:03.01.2023.

* * * * * * *

2022-23ನೇ ಶೈಕ್ಷಣಿಕ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಬೋಧನಾ ಕಾರ್ಯಭಾರಕ್ಕೆ ಅನುಗುಣವಾಗಿ ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳುವ ಸಂಬಂದ ಉಲ್ಲೇಖಿತ-(4) ರ ಸುತ್ತೋಲೆಗಳಂತೆ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಯನ್ನು ಪಡೆದು, ಅರ್ಜಿಯಲ್ಲಿ ನೀಡಿರುವ ಸೇವಾ ಅವಧಿ, ವಿದ್ಯಾರ್ಹತೆ ಇನ್ನಿತರ ವಿವರಗಳ ಆಧಾರದ ಮೇಲೆ ವಿಷಯವಾರು ಕಾರ್ಯಭಾರ ಹಾಗೂ ಮೆರಿಟ್ ಪಟ್ಟಿಯನ್ನು ಸಿದ್ಧಪಡಿಸಿ ದಿನಾಂಕ:03.02.2023 ರಂದು ಇಲಾಖೆಯ ಅಂತರ್ಜಾಲ ತಾಣ https://dce.karnataka.gov.in ರಲ್ಲಿ ಪ್ರಕಟಿಸಲಾಗಿದೆ

ಸದರಿ ಕಾರ್ಯಭಾರ ಹಾಗೂ ಮೆರಿಟ್ ಪಟ್ಟಿಯನ್ವಯ ದಿನಾಂಕ:04.02.2023 ರಿಂದ ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆಯನ್ನು ಕೈಗೊಳ್ಳಲಾಗುತ್ತಿದ್ದು, ವಿಷಯವಾರು ವೇಳಾಪಟ್ಟಿಯನ್ನು ಇಲಾಖೆಯ ಅಂತರ್ಜಾಲ ತಾಣದಲ್ಲಿ ಪ್ರಕಟಿಸಲಾಗಿದೆ. ಅದರನ್ವಯ ಅತಿಥಿ ಉಪನ್ಯಾಸಕ ಅಭ್ಯರ್ಥಿಗಳು ಆನ್‌ಲೈನ್ ಕೌನ್ಸಿಲಿಂಗ್‌ನಲ್ಲಿ ಭಾಗವಹಿಸಲು ಈ ಮೂಲಕ ಸೂಚಿಸಲಾಗಿದೆ.

ಮುಂದುವರೆದು, 2022-23ನೇ ಶೈಕ್ಷಣಿಕ ಸಾಲಿನಲ್ಲಿ ವಿಷಯವಾರು ಅವಶ್ಯವಿರುವ ಅತಿಥಿ ಉಪನ್ಯಾಸಕರ ಸಂಖ್ಯೆಯ 1.5 ರಷ್ಟು ಸಂಖ್ಯೆಗೆ ಸಮನಾಗಿ ಮೆರಿಟ್ ಲಿಸ್ಟ್ ಅನ್ನು ಸಿದ್ಧಪಡಿಸಿ ಪ್ರಕಟಿಸಲಾಗಿದ್ದು, ಮೆರಿಟ್ ಪ್ರಕಾರ ಕೌನ್ಸಿಲಿಂಗ್ ಮಾಡಲಾಗುವುದು ಹಾಗೂ ಅವಶ್ಯವಿರುವ ಸಂಖ್ಯೆಯಷ್ಟು ಅಭ್ಯರ್ಥಿಗಳಿಗೆ ಮಾತ್ರ ಕೌನ್ಸಿಲಿಂಗ್ ಮಾಡಲಾಗುವುದು.

ಉಲ್ಲೇಖ-(3) ರ ಸರ್ಕಾರದ ಆದೇಶದಂತೆ 2022-23ನೇ ಶೈಕ್ಷಣಿಕ ಸಾಲಿನಲ್ಲಿ ನೇಮಕಗೊಳ್ಳುವ ಅತಿಥಿ ಉಪನ್ಯಾಸಕರನ್ನು ಸಂಬಂಧಪಟ್ಟ ವಿಶ್ವವಿದ್ಯಾಲಯಗಳ ಶೈಕ್ಷಣಿಕ ವೇಳಾಪಟ್ಟಿಯಂತೆ 2022-23ನೇ ಶೈಕ್ಷಣಿಕ ಸಾಲಿನ ಮುಕ್ತಾಯದವರೆಗೆ ಅಥವಾ 10 ತಿಂಗಳಿಗೆ ಮಾತ್ರ ಇದರಲ್ಲಿ ಯಾವುದು ಮೊದಲು ಅಲ್ಲಿಯವರೆಗೆ ಮುಂದುವರೆಸಿ, ನಂತರ ಕರ್ತವ್ಯದಿಂದ ಬಿಡುಗಡೆಗೊಳಿಸಲಾಗುತ್ತದೆ.

ಅತಿಥಿ ಉಪನ್ಯಾಸಕ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿದಲ್ಲಿ, ಅಂತಹ ತಪ್ಪು ಮಾಹಿತಿ ಹಾಗೂ ನ್ಯೂನ್ಯತೆಗಳಿಗೆ ಸಂಬಂದಪಟ್ಟ ಅಭ್ಯರ್ಥಿಗಳೇ ಜವಾಬ್ದಾರರಾಗಿರುತ್ತಾರೆ. ಅಲ್ಲದೆ, ಅಭ್ಯರ್ಥಿಗಳು ಅತಿಥಿ ಉಪನ್ಯಾಸಕರ ಆಯ್ಕೆಗೆ ಸಲ್ಲಿಸುವ

.....2

ವಿದ್ಯಾರ್ಹತೆಯ ಅಂಕಪಟ್ಟಿ/ಪ್ರಮಾಣ ಪತ್ರಗಳು, ಸೇವಾ ಪ್ರಮಾಣ ಪತ್ರಗಳು, ಅಂಗವಿಕಲತೆಯ ಪ್ರಮಾಣ ಪತ್ರಗಳು ಹಾಗೂ ಇನ್ನಿತರೆ ದಾಖಲೆಗಳು 'ನಕಲಿ' ಎಂದು ಕಂಡುಬಂದಲ್ಲಿ, ಅಂತಹ ಅಭ್ಯರ್ಥಿಗಳ ವಿರುದ್ಧ, ಕಾನೂನು ಕ್ರಮ ಜರುಗಿಸಿ, ಅವರನ್ನು ಅತಿಥಿ ಉಪನ್ಯಾಸಕರ ಆಯ್ಕೆಯಿಂದ ಶಾಶ್ವತವಾಗಿ ಅನರ್ಹಗೊಳಿಸಲಾಗುವುದು ಎಂಬುದಾಗಿ ಮತ್ತೊಮ್ಮೆ ತಿಳಿಸಲಾಗಿದೆ.

**"ಮಾನ್ಯ ಆಯುಕ್ತರ ಆದೇಶದ ಮೇರೆಗೆ"**

03/02/23

**ಮುಖ್ಯ ಆಡಳಿತಾಧಿಕಾರಿಗಳು**
**ಕಾಲೇಜು ಶಿಕ್ಷಣ ಇಲಾಖೆ**

**ಇವರಿಗೆ:**

1) ಎಲ್ಲಾ ಪ್ರಾದೇಶಿಕ ಜಂಟಿ ನಿರ್ದೇಶಕರುಗಳಿಗೆ-ಮಾಹಿತಿಗಾಗಿ.
2) ಎಲ್ಲಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಪ್ರಾಂಶುಪಾಲರುಗಳಿಗೆ. - ಈ ಸುತ್ತೋಲೆಯನ್ನು ತಮ್ಮ ಕಾಲೇಜುಗಳ ನೋಟೀಸ್ ಬೋರ್ಡ್‌ನಲ್ಲಿ ಕಡ್ಡಾಯವಾಗಿ ಪ್ರಕಟಿಸುವುದರೊಂದಿಗೆ, ಆನ್‌ಲೈನ್ ಕೌನ್ಸಿಲಿಂಗ್ ಪ್ರಕ್ರಿಯೆ ಕುರಿತು ಅತಿಥಿ ಉಪನ್ಯಾಸಕ ಅಭ್ಯರ್ಥಿಗಳಿಗೆ ಮಾಹಿತಿಯನ್ನು ನೀಡುವಂತೆ ಸೂಚಿಸಲಾಗಿದೆ.
3) ಮಾಹಿತಿ ತಂತ್ರಜ್ಞಾನ ಅಧಿಕಾರಿಗಳು, ಕೇಂದ್ರ ಕಛೇರಿ, ಕಾಲೇಜು ಶಿಕ್ಷಣ ಇಲಾಖೆ, ಬೆಂಗಳೂರು - ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು ಸೂಚಿಸಿದೆ.
4) ಕಛೇರಿ ಪ್ರತಿ